ಬೆಂಗಳೂರು ನಗರ ವಿಶ್ವವಿದ್ಯಾನಿಲಯ

ಆಗು ನೀ ಅನಿಕೇತನ
BE BOUNDLESS

BENGALURU CITY UNIVERSITY

Office of the Registrar (Evaluation), Central College Campus, Dr.AmbedkarVeedhi,
Bengaluru – 560 001. E-mail: registrarevlubcu@gmail.com, Ph.No.080-2229555

ಸಂಖ್ಯೆ:ಬೆಂ.ನ.ವಿ/ಪ.ವಿ/ ಸ್ನಾತಕೋತ್ತರ ಮೌಲ್ಯಮಾಪನ/2022-23 ದಿನಾಂಕ:25.11.2022

# ಸುತ್ತೋಲೆ

**ವಿಷಯ: 1, 4 ಮತ್ತು 6ನೇ ಸೆಮಿಸ್ಟರಿನ ಸ್ನಾತಕೋತ್ತರ ಉತ್ತರ ಪತ್ರಿಕೆಗಳ ಮೌಲ್ಯಮಾಪನ ಪೂರ್ಣಗೊಳಿಸಿ ಫಲಿತಾಂಶ ಬಿಡುಗಡೆ ಮಾಡುವ ಕುರಿತು.**

**ಉಲ್ಲೇಖ:** 1. ಸಂಖ್ಯೆ: ಬೆಂ.ಕೇ.ವಿ/ಪ.ವಿ/ಪರೀಕ್ಷಾ ಮೌಲ್ಯಮಾಪನ/ಯು.ಜಿ/2022-23 ದಿನಾಂಕ:10.10.2022

2. ದಿನಾಂಕ 24.11.2022ರಂದು ನಡೆದ ಸಭೆಯಲ್ಲಿ ಕರ್ನಾಟಕ ಸರ್ಕಾರದ ಉನ್ನತ ಶಿಕ್ಷಣ ಇಲಾಖೆಯ ಪ್ರಧಾನ ಕಾರ್ಯದರ್ಶಿಯವರ ಸೂಚನೆ.
3. ಸೆಂಟ್ರಲ್ ಕಾಲೇಜಿನ ವಿವಿಧ ವಿಭಾಗಗಳ ವಿದ್ಯಾರ್ಥಿಗಳು ಸಲ್ಲಿಸಿರುವ ಮನವಿ ಪತ್ರ ದಿನಾಂಕ 24.11.2022.

*****

ಸೆಪ್ಟಂಬರ್/ಅಕ್ಟೋಬರ್ -2022 ರಲ್ಲಿ 1,4 ಮತ್ತು 6ನೇ ಸೆಮಿಸ್ಟರಿನ ಸ್ನಾತಕೋತ್ತರ ಪರೀಕ್ಷೆಗಳು ನಡೆದಿದ್ದು, ಮೌಲ್ಯಮಾಪನ ಕಾರ್ಯ ಪ್ರಾರಂಭವಾಗಿದೆ. ಈಗಾಗಲೇ ಬೇರೆ ವಿಶ್ವವಿದ್ಯಾಲಯಗಳು ಫಲಿತಾಂಶ ಬಿಡುಗಡೆ ಮಾಡಿರುವುದನ್ನು ಗಮನಿಸಿರುವ ಉನ್ನತ ಶಿಕ್ಷಣ ಇಲಾಖೆಯ ಪ್ರಧಾನ ಕಾರ್ಯದರ್ಶಿಯವರು ಶೀಘ್ರವಾಗಿ ಫಲಿತಾಂಶ ಬಿಡುಗಡೆ ಮಾಡುವಂತೆ ಸೂಚಿಸಿರುತ್ತಾರೆ. ಆದುದರಿಂದ ಆದಷ್ಟು ಬೇಗ ಎಲ್ಲಾ ವಿಷಯದ ಅಧ್ಯಾಪಕರನ್ನು (ಅತಿಥಿ ಉಪನ್ಯಾಸಕರು ಸೇರಿದಂತೆ) ಮೌಲ್ಯಮಾಪನ ಪ್ರಕ್ರಿಯೆಯಲ್ಲಿ ಭಾಗವಹಿಸಿ ಶೀಘ್ರವಾಗಿ ಮೌಲ್ಯಮಾಪನ ಕಾರ್ಯವನ್ನು ಮುಗಿಸಿ ಫಲಿತಾಂಶ ಬಿಡುಗಡೆ ಮಾಡಲು ಸಹಕರಿಸಬೇಕೆಂದು ಕಛೇರಿ ಸುತ್ತೋಲೆ ದಿನಾಂಕ 10.10.2022 ರಲ್ಲಿ ಕೋರಲಾಗಿತ್ತು. ಆದರೆ, ಕೆಲವು ವಿಭಾಗಗಳ ಮೌಲ್ಯಮಾಪನ ಕಾರ್ಯ ಪೂರ್ಣಗೊಂಡಿಲ್ಲದಿರುವುದು ಗಮನಕ್ಕೆ ಬಂದಿರುತ್ತದೆ. ಇದರಿಂದ ವಿದ್ಯಾರ್ಥಿಗಳ ಫಲಿತಾಂಶ ಪ್ರಕಟಿಸಲು ವಿಳಂಬವಾಗುತ್ತಿದೆ. ಇದರಿಂದ, ಸೆಂಟ್ರಲ್ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು, ಕುಲಸಚಿವರು(ಮೌಲ್ಯಮಾಪನ) ಅವರನ್ನು ಭೇಟಿ ಮಾಡಿ ಶೀಘ್ರವಾಗಿ ಫಲಿತಾಂಶ ಪ್ರಕಟಿಸಬೇಕೆಂದು ಒತ್ತಾಯಿಸಿ ಮನವಿ ಪತ್ರ ನೀಡಿರುತ್ತಾರೆ. ಆದುದರಿಂದ, ಎಲ್ಲಾ ವಿಭಾಗಗಳ ಮುಖ್ಯಸ್ಥರು ಹಾಗೂ ಪರೀಕ್ಷಾ ಮಂಡಳಿಯ ಅಧ್ಯಕ್ಷರು ತಮ್ಮ ವಿಷಯಗಳ ಉತ್ತರ ಪತ್ರಿಕೆಗಳನ್ನು ಶೀಘ್ರವಾಗಿ ಮೌಲ್ಯಮಾಪನ ಮಾಡಿ, ಫಲಿತಾಂಶ ಪ್ರಕಟಿಸಲು ಸಹಕರಿಸಬೇಕೆಂದು ಕೋರಲಾಗಿದೆ.

ತಮ್ಮ ವಿಶ್ವಾಸಿ,

Lokesha. L.

**ಕುಲಸಚಿವರು(ಮೌಲ್ಯಮಾಪನ)**

**ಕುಲಸಚಿವರು (ಮೌಲ್ಯಮಾಪನ)**
**ಬೆಂಗಳೂರು ನಗರ ವಿಶ್ವವಿದ್ಯಾನಿಲಯ**
**ಸೆಂಟ್ರಲ್ ಕಾಲೇಜು ಕ್ಯಾಂಪಸ್**
**ಬೆಂಗಳೂರು - 560 001**

**ಗೆ,**

**ಬೆಂಗಳೂರು ನಗರ ವಿಶ್ವವಿದ್ಯಾಲಯದ ಎಲ್ಲಾ ಸ್ನಾತಕೋತ್ತರ ಕೋರ್ಸುಗಳ ಹಾಗೂ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರುಗಳು, ಬೆಂಗಳೂರು ನಗರ ವಿಶ್ವವಿದ್ಯಾನಿಲಯ, ಬೆಂಗಳೂರು.**

**ಪ್ರತಿಗಳು:**

1. ಸ್ನಾತಕೋತ್ತರ ಪರೀಕ್ಷಾ ಮಂಡಳಿ ಅಧ್ಯಕ್ಷರು, ಬೆಂಗಳೂರು ನಗರ ವಿಶ್ವವಿದ್ಯಾಲಯ, ಬೆಂಗಳೂರು.
2. ಕುಲಪತಿಗಳು/ಕುಲಸಚಿವರು(ಆ)/ಕುಲಸಚಿವರು(ಮೌ)/ ವಿತ್ತಾಧಿಕಾರಿಯವರ ಕಾರ್ಯದರ್ಶಿಗಳು, ಬೆಂಗಳೂರು ನಗರ ವಿಶ್ವವಿದ್ಯಾಲಯ, ಬೆಂಗಳೂರು.
3. ವೆಬ್‌ಸೈಟ್ ನಿವಾಹಕರು, ಮೇಲೆ ಹೇಳಿರುವ ಸುತ್ತೋಲೆಯನ್ನು ಬೆಂಗಳೂರು ನಗರ ವಿಶ್ವವಿದ್ಯಾಲಯದ ವೆಬ್‌ಸೈಟ್‌ನಲ್ಲಿ ಹಾಗೂ ಕಾಲೇಜ್ ಪೋರ್ಟ್ರಲ್‌ನಲ್ಲಿ ಅಪ್ಲೋಡ್ ಮಾಡಲು ಕೋರಲಾಗಿದೆ.